**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ: 913/2024**

**ಪಿರ್ಯಾದಿದಾರರು:** ರಾಜ್ಯ ಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ

**ವಿರುದ್ದ**

**ಆರೋಪಿತರು:**
1. ಶೀಲಾ.ಓ.ಜಿ ಉಃ ಕಾವ್ಯ ಕೋಂ ಹೇಮಂತ್ ಕುಮಾರ್
2. ಹೇಮಂತ್ ಕುಮಾರ್.ಎಂ.ಎನ್ ಉಃ ಹೇಮಂತ್ ಬಿನ್ ಜಾನೇಗೌಡ

**ದೋಷಾರೋಪಣೆ**

**ಶ್ರೀಮತಿ ಕುಸುಮ ವಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಚನ್ನರಾಯಪಟ್ಟಣ ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಹೊರಿಸುವ ದೋಷಾರೋಪಣೆ ಏನೆಂದರೆ,

ದಿನಾಂಕಃ 20.06.2024 ರಂದು ಬೆಳಿಗ್ಗೆ 10.00 ಗಂಟೆ ಸಮಯದಲ್ಲಿ, ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣಾ ಸರಹದ್ದಿಗೆ ಸೇರಿದ, ವೆದೇಗೌಡನಕೊಪ್ಪಲು ಗ್ರಾಮದಲ್ಲಿ ಚಾಸಾ.1 ರವರು ಮನೆಯ ಮುಂದಿನ ಸಿಮೆಂಟ್ ರಸ್ತೆಯಲ್ಲಿ ನಿಂತಿದ್ದಾಗ ಆರೋಪಿತರಾದ ನೀವು ಮತ್ತು 2 ನೇ ಆರೋಪಿಯು ಸಮಾನ ಉದ್ದೇಶದಿಂದ ಅವರ ಹಿತ್ತಲಿನಲ್ಲಿ ನೆಟ್ಟಿರುವ ನುಗ್ಗೆಗಿಡವನ್ನು ಚಾಸಾ.1 ರವರೇ ಕಿತ್ತು ಹಾಕಿರುವುದಾಗಿ ತಪ್ಪಾಗಿ ತಿಳಿದು, ಸಾಕ್ಷಿ.1 ರವರನ್ನು ಕುರಿತು ಅವರು ಕುಪಿತರಾಗಿ ಶಾಂತಿಭಂಗವನ್ನುಂಟುಮಾಡಲಿ ಎಂಬ ಉದ್ದೇಶದಿಂದ, ಸಾಕ್ಷಿ.1 ರವರಿಗೆ ಬಾಯಿಗೆ ಬಂದಂತೆ ಲೋಪರ್ ಮುಂಡೆ ಎಂದು ಅವಾಚ್ಯ ಶಬ್ದಗಳಿಂದ ಬೈದು, ಆ ಮೂಲಕ 1 ನೇ ಆರೋಪಿಯಾದ ನೀವು **ಭಾರತೀಯ ದಂಡ ಸಂಹಿತೆ ಕಲಂ: 504** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

2) ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶವನ್ನು ಹೊಂದಿ, 1 ನೇ ಆರೋಪಿಯಾದ ನೀವು ಉದ್ದೇಶ ಪೂರ್ವಕವಾಗಿ ಸಾಕ್ಷಿ.1 ರವರ ಮುಖಕ್ಕೆ ಕೈಯಿಂದ ಹೊಡೆದು ನೋವುಂಟು ಮಾಡಿದ್ದು, ಈ ಮೂಲಕ 1 ನೇ ಆರೋಪಿಯಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 324** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**ಪ್ರಶ್ನೆಃ** 1. ಈಗ ನಿಮಗೆ ಓದಿ ಹೇಳಲಾದ ನಿಮ್ಮ ಮೇಲಿನ ದೋಷಾರೋಪಣೆ ನಿಮಗೆ ತಿಳಿಯಿತೆ ?

1 ನೇ ಆರೋಪಿಯ ಉತ್ತರಃ

2 ನೇ ಆರೋಪಿಯ ಉತ್ತರಃ

**ಪ್ರಶ್ನೆಃ** 2. ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ನಡೆಯಲೆಂದು ಬಯಸುತ್ತೀರಾ ?

1 ನೇ ಆರೋಪಿಯ ಉತ್ತರಃ

2 ನೇ ಆರೋಪಿಯ ಉತ್ತರಃ

(ಈ ದೋಷರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿ/ಗಳಿಗೆ ತಿಳಿದಿರುವ ಭಾಷೆಯಲ್ಲಿ ಓದಿ ಹೇಳಿ ಕೇಳಲಾಗಿ ಆರೋಪಿ/ಗಳು ನೀಡಿರುವ ಉತ್ತರಗಳನ್ನು ಪಡೆದುಕೊಂಡಿದ್ದು ಅವು ಸರಿ ಇವೆ ಎಂದು ದೃಢೀಕರಿಸಲಾಯಿತು)

ದಿನಾಂಕಃ **27.03.2026**

(ಶ್ರೀಮತಿ ಕುಸುಮ ವಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.